ಉ) ಟ್ರಾನ್ಸ್‌ಫಾರ್ಮರ್‌ಗಳು ವಿದ್ಯುತ್ ಇಲಾಖೆಯ ನಿರ್ಲಕ್ಷದಿಂದ ಅಥವಾ ಅಧಿಕ ವಿದ್ಯುತ್ ಒತ್ತಡ ಒಮ್ಮೆಗೆ ಹೆಚ್ಚಾದಾಗ ವಿಫಲ ಹೊಂದಿದಲ್ಲಿ ಈ ಟ್ರಾನ್ಸ್‌ಫಾರ್ಮರ್‌ಗಳನ್ನು ಸಂಬಂಧಿಸಿದ ವಿದ್ಯುತ್ ವಿತರಣಾ ಕಂಪೆನಿಗಳು ದುರಸ್ಥಿ ಮಾಡಿಸಬೇಕಾಗುತ್ತದೆ

ಊ) ಈ ಪ್ರಶ್ನೆ ಉದ್ಭವಿಸುವುದಿಲ್ಲ

ಚಿಕ್ಕನಾಯಕನಹಳ್ಳಿ ತಾಲ್ಲೂಕು ವ್ಯಾಪ್ತಿಗೆ ವಿದ್ಯುತ್ ಪರಿವರ್ತಕಗಳನ್ನು ಸರಬರಾಜು ಮಾಡುವ ಬಗ್ಗೆ

04 (171) ಶ್ರೀ ಸುರೇಶ್ ಬಾಬು ಸಿ ಬಿ (ಚಿಕ್ಕನಾಯಕನಹಳ್ಳಿ) ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನಲ್ಲಿ ವಿದ್ಯುತ್ ಪರಿವರ್ತಕಗಳನ್ನು ರೈತರಿಗೆ ಮತ್ತು ಕುಡಿಯುವ ನೀರಿನ ಉದ್ದೇಶಕ್ಕೆ ಸಕಾಲದಲ್ಲಿ ಒದಗಿಸಲು ಸಾಧ್ಯವಾಗುತ್ತಿಲ್ಲದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ,

ಆ) ಹಾಗಿದ್ದಲ್ಲಿ ಸಕಾಲದಲ್ಲಿ ವಿದ್ಯುತ್ ಪರಿವರ್ತಕಗಳನ್ನು ಒದಗಿಸಲು ಯಾವ ಕ್ರಮ ತೆಗೆದುಕೊಳ್ಳಲಾಗುವುದು

ಇ) ಬೇಸಿಗೆಯಲ್ಲಿ ಕುಡಿಯುವ ನೀರಿನ ಸಮಸ್ಯೆ ಹೆಚ್ಚಾಗುವುದರಿಂದ ತ್ವರಿತಗತಿಯಲ್ಲಿ ವಿದ್ಯುತ್ ಪರಿವರ್ತಕಗಳನ್ನು ಒದಗಿಸಲು ಏನು ಕ್ರಮ ತೆಗೆದುಕೊಳ್ಳಲಾಗುವುದು?

ಶ್ರೀ ಬಸವರಾಜ್ ಪಾಟೀಲ್ (ಇಂಧನ ರಾಜ್ಯ ಸಚಿವರು)

ಅ) ಹೌದು ಗಮನಕ್ಕೆ ಬಂದಿದೆ

ಆ) ಕುಡಿಯುವ ನೀರಿನ ಯೋಜನೆಗೆ ಸಂಬಂಧಿಸಿದಂತೆ ವಿಫಲವಾದ ಪರಿವರ್ತಕಗಳನ್ನು ಬದಲಾಯಿಸಲಾಗಿದೆ ನೀರಾವರಿ ಪಂಪ್ ಸೆಟ್‌ಗಳಿಗೆ ಸಂಬಂಧಿಸಿದಂತೆ ವಿಫಲವಾದ ಪರಿವರ್ತಕಗಳನ್ನು ಬದಲಾಯಿಸಲು ಬೇಕಾದ ಪರಿವರ್ತಕಗಳನ್ನು ತುಮಕೂರು ಜಿಲ್ಲೆಯ ದುರಸ್ತಿ ಕೇಂದ್ರ ಹಾಗೂ ಕ ವಿ ಕಾ ಪರಿವರ್ತಕ ತಯಾರಿಕಾ ಕೇಂದ್ರಗಳಿಂದ ಪಡೆಯಲು ಕ್ರಮ ತೆಗೆದುಕೊಳ್ಳಲಾಗುತ್ತಿದೆ

ಇ) ಚಿಕ್ಕನಾಯಕನಹಳ್ಳಿ ತಾಲ್ಲೂಕಿನ ಕುಡಿಯುವ ನೀರಿನ ಸಮಸ್ಯೆ ಇರುವ ಹಳ್ಳಿಗಳಲ್ಲಿ ಪ್ರತ್ಯೇಕವಾಗಿ ಕುಡಿಯುವ ನೀರಿನ ವ್ಯವಸ್ಥೆಗಾಗಿ 28 ಸಂಖ್ಯೆಯ ಅಧಿಕ ಪರಿವರ್ತಕಗಳನ್ನು ಅಳವಡಿಸಲು ಕ್ರಮ ಕೈಗೊಳ್ಳಲಾಗಿದೆ

ಕಮಲಾಪುರ್ ಕ್ಷೇತ್ರ ವ್ಯಾಪ್ತಿಯಲ್ಲಿ ಇರುವ ಪರಿಶಿಷ್ಟ ಪಂಗಡ ಮತ್ತು ತಾಂಡಾಗಳಿಗೆ ವಿದ್ಯುತ್ ಸಂಪರ್ಕ ಕಲ್ಪಿಸುವುದು

05 (416) ಶ್ರೀ ರೇವುನಾಯಕ್ ಬೆಳಮಗಿ (ಕಮಲಾಪೂರ್) ಮಾನ್ಯ ಇಂಧನ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಗುಲ್ಬರ್ಗ ಜಿಲ್ಲೆ ಕಮಲಾಪುರ ಮತಕ್ಷೇತ್ರದ ವ್ಯಾಪ್ತಿಯಲ್ಲಿ ಬರುವ ಪರಿಶಿಷ್ಟ ಪಂಗಡ ಹಾಗೂ ಲಂಬಾಣಿ ತಾಂಡಗಳ ಹಳೆ ಮತ್ತು ಹೊಸ ಬಡಾವಣೆಗಳಿಗೆ ವಿದ್ಯುತ್ ಸಂಪರ್ಕ ನೀಡಲು ಸರ್ಕಾರ ಕ್ರಮ ಕೈಗೊಂಡಿದೆಯೆ ಹಾಗಿದ್ದಲ್ಲಿ ಯಾವ ರೀತಿಯ ಕ್ರಮ ಕೈಗೊಂಡಿದೇ

ಆ) ಈ ತಾಂಡಗಳ ಪೈಕಿ ಈವರೆಗೆ ಎಷ್ಟು ತಾಂಡಗಳಿಗೆ ವಿದ್ಯುತ್ ಸಂಪರ್ಕ ನೀಡಲಾಗಿದೆ?